**<u>1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಮೂಡಿಗೆರೆ</u>**

**<u>ಸಿ.ಸಿ. ಸಂಖ್ಯೆಃ 1532/2025</u>**

<u>ಪಿರ್ಯಾದಿ</u> : ರಾಜ್ಯ, ಪರವಾಗಿ ಬಣಕಲ್ ಪೊಲೀಸರು,
ಮೂಡಿಗೆರೆ ತಾಲ್ಲೂಕು.

ವಿರುದ್ಧ

<u>ಆರೋಪಿ</u> : ಶ್ರೀ ಜಾಬೀರ್ ಹುಸೇನ್,
ವಯಸ್ಸು ಸುಮಾರು 42 ವರ್ಷ,
ಬಿನ್ ನವಾಬ್ ಜಾನ್,
ವಾಸಃ ಚಕ್ಕಮಕ್ಕಿ ಗ್ರಾಮ,
ಬಣಕಲ್ ಹೋಬಳಿ,
ಮೂಡಿಗೆರೆ ತಾಲ್ಲೂಕು.

<u>ದೋಷಾರೋಪಣೆ</u>

ಶ್ರೀಮತಿ ಸುರಕ್ಷ ಕೆ.ಕೆ., 1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ, ಮೂಡಿಗೆರೆ, ಆದ ನಾನು, ಆರೋಪಿತರಾದ ನಿಮ್ಮ ಮೇಲೆ ಮಾಡುವ ದೋಷಾರೋಪಣೆ ಏನೆಂದರೆಃ-

ದಿನಾಂಕ 31.05.2025 ರಂದು ಬೆಳಗ್ಗೆ 10.00 ರ ಸಮಯದಲ್ಲಿ ಬಣಕಲ್ ಪೋಲೀಸ್ ಠಾಣಾ ವ್ಯಾಪ್ತಿಯ ಚಕ್ಕಮಕ್ಕಿ ಕ್ರಾಸ್ ನಿಂದ ಬಿ.ಹೊಸಳ್ಳಿ ಕಡೆಗೆ ಹೋಗುವ ಸಾರ್ವಜನಿಕ ರಸ್ತೆಯಲ್ಲಿ ಆರೋಪಿಯಾದ ನೀವು ಚಾಸಾ1-ಸಲ್ಮಾನ್ ಖಾನ್ ರವರಿಗೆ ನನಗೆ ಮೊಬೈಲ್ ಅನ್ನು ತಂದು ಕೊಡುವುದಾಗಿ ಹೇಳಿ ರೂ 24,000/- ಹಣವನ್ನು ಪಡೆದುಕೊಂಡಿದ್ದು, ಇಲ್ಲಿಯವರೆಗೂ ನನಗೆ ಮೊಬೈಲ್ ಹಾಗೂ ಹಣ ಯಾವುದನ್ನೂ ನೀಡಿರುವುದಿಲ್ಲ, ಈಗ ನನಗೆ ಮೊಬೈಲ್ ಬೇಡ 24,000/- ರೂ ಹಣವನ್ನು ನನಗೆ ಕೊಡು ಎಂದು ಹೇಳಿದ್ದು, ಅದಕ್ಕೆ ಚಾಸಾ1 ರವರು ಚೆಕ್ ಬ್ಯಾಂಕಿನಲ್ಲಿದೆ, ಈ ದಿನ ನನಗೆ ಹಣ ಬರುತ್ತದೆ, ಕೊಡುತ್ತೇನೆ ಎಂದು ಹೇಳಿದ್ದು, ಆಗ ಆರೋಪಿಯಾದ ನೀವು ಚಾಸಾ1 ರವರಿಗೆ ನನ್ನ ಹಣವನ್ನು ಕೊಡಲು ಇನ್ನು ಎಷ್ಟು ದಿನ ಬೇಕು ನಿನಗೆ ಬೋಳಿಮಗನೇ ಎಂದು ಅವಾಚ್ಯ ಶಬ್ದಗಳಿಂದ ಬೈಯುತ್ತಾ ಉದ್ದೇಶಪೂರ್ವಕವಾಗಿ ಶಾಂತಿಭಂಗವನ್ನುಂಟು ಮಾಡಿರುತ್ತೀರಿ. ಈ ರೀತ್ಯಾ ಆರೋಪಿಯಾದ ನೀವು ಭಾರತೀಯ ನ್ಯಾಯ ಸಂಹಿತೆ ಕಲಂ **352** ರಡಿಯಲ್ಲಿ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ವ್ಯಾಪ್ತಿಯಲ್ಲಿ ಎಸಗಿರುತ್ತೀರಿ ಎಂದು ದೋಷಾರೋಪಿಸಲಾಗಿದೆ.

**2.** ಮೇಲೆ ಹೇಳಿದ ದಿನಾಂಕ, ಸ್ಥಳ ಮತ್ತು ಸಮಯದಲ್ಲಿ ಆರೋಪಿಯಾದ ನೀವು ಮುಂದುವರೆದು, ಅಲ್ಲೇ ಬಿದ್ದಿದ್ದ ಪೈಪಿನಿಂದ ಚಾಸಾ1 ರವರ ಎಡ ಕೈನ ಮೊಣಕೈ ಮೇಲೆ ಹೊಡೆದು ಸಾಮಾನ್ಯ ಸ್ವರೂಪದ ಗಾಯವನ್ನುಂಟು ಮಾಡಿರುತ್ತೀರಿ. ಈ ರೀತ್ಯಾ ಆರೋಪಿಯಾದ ನೀವು

ಭಾರತೀಯ ನ್ಯಾಯ ಸಂಹಿತೆ ಕಲಂ **118(1)** ರಡಿಯಲ್ಲಿ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ವ್ಯಾಪ್ತಿಯಲ್ಲಿ ಎಸಗಿರುತ್ತೀರಿ ಎಂದು ದೋಷಾರೋಪಿಸಲಾಗಿದೆ?

ಸದರಿ ಮೇಲ್ಕಂಡ ಆರೋಪಗಳನ್ನು ಈ ನ್ಯಾಯಾಲಯದ ವ್ಯಾಪ್ತಿಯಲ್ಲಿ ಮಾಡಿದ್ದರಿಂದ, ಅವುಗಳು ಈ ನ್ಯಾಯಾಲಯದಿಂದ ವಿಚಾರಣೆಯಾಗತಕ್ಕದೆಂದು ಆದೇಶಿಸಲಾಗಿದೆ.

ಪ್ರಃ 1. ಈಗ ಮೇಲೆ ಓದಿ ಹೇಳಿದ ದೋಷಾರೋಪಣೆಯನ್ನು ಕೇಳಿದ್ದೀರಾ? ಅವುಗಳು ನಿಮಗೆ ಅರ್ಥವಾಯಿತೇ?

ಆರೋಪಿಯ ಉತ್ತರಃ

ಪ್ರಃ 2. ನೀವು ದೋಷಾರೋಪಣೆಯನ್ನು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆಯಾಗಬೇಕೋ?

ಆರೋಪಿಯ ಉತ್ತರಃ

(ಆರೋಪಿತರಿಗೆ ದಿನಾಂಕ 17.01.2026 ರಂದು ದೋಷಾರೋಪಣೆಯನ್ನು ಅವರಿಗೆ ತಿಳಿಯುವ ಭಾಷೆಯಲ್ಲಿ ಓದಿ, ಅವರ ಹೇಳಿಕೆಯನ್ನು ನನ್ನ ಸಮಕ್ಷಮದಲ್ಲಿ ಬರೆದುಕೊಳ್ಳಲಾಯಿತು. ಅದು ಸತ್ಯವಾಗಿಯೂ ಮತ್ತು ಸರಿಯಾಗಿಯೂ ಇರುತ್ತದೆ ಅಂತಾ ಪ್ರಮಾಣೀಕರಿಸುತ್ತೇನೆ)

**Sd/-**

ಮೂಡಿಗೆರೆ,
ದಿನಾಂಕಃ 17.01.2026

1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ,
ಮೂಡಿಗೆರೆ.